# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 477

ಸದಸ್ಯರ ಹೆಸರು : ಶ್ರೀ ಅರುಣ ಶಹಾಪುರ(ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 04/02/2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಭಾಷಾ ಅಲ್ಪಸಂಖ್ಯಾತ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಇರಲು ರೋಷ್ಟರ್ ನಿಯಮಾವಳಿಗಳೇನು; ಹಾಗೂ ರೋಷ್ಟರ್ ಅನ್ವಯವಾಗುತ್ತಿದೆಯೇ; | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 61 ಎಸ್‌ಎಂಸಿ 2009 ದಿನಾಂಕ:03/09/2010ರಲ್ಲಿ ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು (Linguistic Minority Institutions) ಅನುದಾನಿತ ಶಾಲೆಗಳಲ್ಲಿ ಮೀಸಲಾತಿ ಕಡ್ಡಾಯವಾಗಿ ಮೀಸಲಾತಿ ನಿಯಮಗಳನ್ನು ಪಾಲಿಸತಕ್ಕದೆಂದು ಆದೇಶಿಸಲಾಗಿದೆ. ರೋಷ್ಟರ್ ಅನ್ವಯವಾಗುತ್ತದೆ. |
| ಆ) | ಈ ರೋಷ್ಟರ್ ವಿನಾಯಿತಿ ನೀಡುವ ಸಂಬಂಧ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ಸರ್ಕಾರಕ್ಕೆ ಸಲಹೆ ಕೇಳಿದೆಯೇ ; ಕೇಳಿದ್ದರೆ, ಸರ್ಕಾರದ ನಿಲುವೇನು ; ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮಾನದಂಡಗಳೇನು ?(ಪ್ರಸ್ತಾವನೆಯ ಸಂಪೂರ್ಣ ವಿವರ ನೀಡುವುದು) | ಕಡತ ಸಂಖ್ಯೆ: ಇಡಿ 33 ಎಸ್‌ಎಂಸಿ 2012 ರಲ್ಲಿ ಭಾಷಾ ಅಲ್ಪ ಸಂಖ್ಯಾತ ಶಾಲೆಗಳಲ್ಲಿ ಮೀಸಲಾತಿಯನ್ನು ಪಾಲಿಸುವ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:9744/2012ರ ದಿನಾಂಕ:28/10/2013ರ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 6 ಎಸ್‌ಎಂಸಿ 2009 ದಿನಾಂಕ:03/09/2010 ರಲ್ಲಿ ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯೆಂದು ಘೋಷಿಸುವ ಸಂದರ್ಭದಲ್ಲಿ ರೋಸ್ಟರ್ ಪದ್ಧತಿ ಪಾಲಿಸುವ ಷರತ್ತು ವಿಧಿಸಿರುವುದನ್ನು ರದ್ದುಗೊಳಿಸಿರುವುದರಿಂದ ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಪಾಲನೆ ಮಾಡುವ ಬಗ್ಗೆ ಸಿಆಸುಇ(ಸೇವಾ ನಿಯಮಗಳು) ಅಭಿಪ್ರಾಯವನ್ನು ಕೋರಲಾಗಿದ್ದು, ಅಭಿಪ್ರಾಯ ನಿರೀಕ್ಷಿಸಲಾಗುತ್ತಿದೆ. |

(ಎಸ್.ಸುರೇಶ್‌ಕುಮಾರ್)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಇಪಿ 3 ಪಿಡಿಬಿ 2021